ಶೀಘ್ರ ಕ್ರಮ ಕೈಗೊಳ್ಳಲಾಗುತ್ತಿದೆ.

ವಿಷಯ : – ಕಲಘಟಗಿಯಲ್ಲಿ ಸರ್ಕಾರಿ ಪದವಿ ಕಾಲೇಜು
ಚುಕ್ಕೆ ಗುರುತಿಲ್ಲದ ಪ್ರಶ್ನೆ 299(337)

ಶ್ರೀ ಪಿ.ಸಿ.ಸಿದ್ದನಗೌಡರ್(ಕಲಘಟಗಿ)

ಮಾನ್ಯ ಉನ್ನತ ಶಿಕ್ಷಣ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಧಾರವಾಡ ಜಿಲ್ಲೆ ಕಲಘಟಗಿಯಲ್ಲಿ ಸರ್ಕಾರಿ ಪದವಿ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇಲ್ಲದಿದ್ದಲ್ಲಿ ಅಲ್ಲಿ ಹೊಸದಾಗಿ ಸರ್ಕಾರಿ ಪದವಿ ಕಾಲೇಜನ್ನು ತೆರೆಯಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಎಸ್.ಎಂ.ಯಾಹ್ಯಾ
(ಉನ್ನತ ಶಿಕ್ಷಣ ಮತ್ತು ವಕ್ಫ್ ಸಚಿವರು)

ಬಂದಿದೆ.

ಇಲ್ಲ.

ವಿಷಯ : – ಶಿಕ್ಷಕರುಗಳ ಕೊರತೆಯ ನಿವಾರಣೆಗೆ ಕ್ರಮ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 300(97)

ಶ್ರೀ ಎ.ಟಿ.ರಾಮಸ್ವಾಮಿ (ಆರಕಲಗೂಡು)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಶಿಕ್ಷಣ ಶಾಲೆಗಳಲ್ಲಿ ಶಿಕ್ಷಕರುಗಳ ಕೊರತೆಯಿದ್ದು ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯುಂಟಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ. ಹಾಗಿದ್ದಲ್ಲಿ ಶಿಕ್ಷಕರುಗಳ ಕೊರತೆಯನ್ನು ನಿವಾರಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀಮತಿ ನಾಗಮ್ಮ ಸಿ.ಕೇಶವಮೂರ್ತಿ
(ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು)

ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರಕಾರದ ಗಮನಕ್ಕೆ ಬಂದಿದೆ.

ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ವಿಷಯ : – ದಕ್ಷಿಣ ಕನ್ನಡ ಜಿಲ್ಲೆಯ ಶಾಲಾ ವಿದ್ಯಾರ್ಥಿಗಳಿಗೆ ಶೌಚಾಲಯ ಮತ್ತು ಮೈದಾನ ವ್ಯವಸ್ಥೆ ಇಲ್ಲದಿರುವ ಬಗ್ಗೆ.
ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ 301(198)

ಶ್ರೀ ಬಿ.ಎಂ.ಇದಿನಬ್ಬ(ಉಳ್ಳಾಲ)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?